**All India Radio: Bangalore**
**Regional Bulletin In Kannada**
**23.08.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**23.08.2025 / 2.30 p.m.**
**<><><><>**

ಮುಖ್ಯಾಂಶಗಳು

1. ಧರ್ಮಸ್ಥಳ ಪ್ರಕರಣ ; ದೂರುದಾರ ೧೦ ದಿನಗಳ ಕಾಲ ಎಸ್.ಐ.ಟಿ ವಶಕ್ಕೆ
2. ಸಾರ್ವಜನಿಕ ಗಣೇಶೋತ್ಸವ; ಪೊಲೀಸರಿಂದ ಕಡ್ಡಾಯ ಅನುಮತಿ ಪಡೆಯುವಂತೆ ಜಿಲ್ಲಾಡಳಿತಗಳಿಂದ ನಿರ್ದೇಶನ
3. ಇಂದು ರಾಷ್ಟ್ರೀಯ ಬಾಹ್ಯಾಕಾಶ ದಿನ ; ಬೆಂಗಳೂರಿನ ಜವಹಾರ್‌ಲಾಲ್ ನೆಹರು ತಾರಾಲಯದಲ್ಲಿ ವಿಶೇಷ ಕಾರ್ಯಕ್ರಮ
4. ಅಪಾಯದ ಮಟ್ಟ ಮೀರಿ ಹರಿಯುತ್ತಿರುವ ಕೃಷ್ಣಾ ನದಿ ; ನದಿ ಪಾತ್ರದ ಜನರು ಎಚ್ಚರಿಕೆ ವಹಿಸುವಂತೆ ಸೂಚನೆ

<><><><>

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಗ್ರಾಮ ವ್ಯಾಪ್ತಿಯಲ್ಲಿ ಹಲವು ಮೃತದೇಹಗಳನ್ನು ಹೂತು ಹಾಕಲಾಗಿದೆ ಎನ್ನಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರುದಾರನನ್ನು ವಿಶೇಷ ತನಿಖಾ ದಳ-ಎಸ್.ಐ.ಟಿ ಅಧಿಕಾರಿಗಳು ಬಂಧಿಸಿದ್ದಾರೆ. ಬಳಿಕ ಆತನನ್ನು ಬೆಳ್ತಂಗಡಿ ಸರ್ಕಾರಿ ಆಸ್ಪತ್ರೆಗೆ ಕರೆತಂದು ಆರೋಗ್ಯ ತಪಾಸಣೆ ನಡೆಸಲಾಗಿದೆ. ಮಂಗಳೂರು ಸಕ್ಷಮ ಪ್ರಾಧಿಕಾರದಿಂದ ನಿನ್ನೆ ಸುರಕ್ಷತಾ ಕಾಯ್ದೆಯನ್ನು ರದ್ದು ಮಾಡಿದ್ದು, ಇಂದು ಬೆಳಗ್ಗೆ ದೂರುದಾರನನ್ನು ಬಂಧಿಸಲಾಯಿತು. ಆರೋಗ್ಯ ತಪಾಸಣೆಯ ಬಳಿಕ ದೂರುದಾರನನ್ನು ಬೆಳ್ತಂಗಡಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಬಳಿಕ ನ್ಯಾಯಾಲಯ ದೂರುದಾರನನ್ನು ೧೦ ದಿನಗಳ ಕಾಲ ಎಸ್.ಐ.ಟಿ ವಶಕ್ಕೆ ಒಪ್ಪಿಸಿದೆ. ಈಗಾಗಲೇ ದೂರುದಾರ ಪೊಲೀಸರ ಮುಂದೆ ಹಲವಾರು ವಿಚಾರ ಹೇಳಿಕೊಂಡಿದ್ದು, ಪ್ರಕರಣದ ಬಗ್ಗೆ ಎಸ್.ಐ.ಟಿ ತಂಡ ಮತ್ತೆ ಹೆಚ್ಚಿನ ವಿಚಾರಣೆ ನಡೆಸುವ ನಿರೀಕ್ಷೆಯಿದೆ.

<><><><>

ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ ನೇತೃತ್ವದಲ್ಲಿ ಚನ್ನಾರಾಯಪಟ್ಟಣದಿಂದ ಹಾಸನ ಮಾರ್ಗವಾಗಿ ನೂರಾರು ಕಾರುಗಳಲ್ಲಿ ಧರ್ಮಸ್ಥಳಕ್ಕೆ ಧರ್ಮಯಾತ್ರೆ ತೆರಳಿದೆ. ಈ ವೇಳೆ ನಗರದ ಬುಸ್ತೆನಹಳ್ಳಿ ಬೈಪಾಸ್ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಎಂ.ಎ.ಗೋಪಾಲಸ್ವಾಮಿ, ಧರ್ಮಸ್ಥಳದ ವಿಚಾರದಲ್ಲಿ ಕಳೆದ ಹಲವು ದಿನಗಳಿಂದ ಧಾರ್ಮಿಕ ವಿಚಾರಗಳಲ್ಲಿ ಸಾಕಷ್ಟು ಗೊಂದಲಗಳಿವೆ. ಧಾರ್ಮಿಕ ಭಾವನೆಗಳನ್ನು ಗಟ್ಟಿಗೊಳಿಸಿ, ಇದರ ಜೊತೆಗೆ ಅಲ್ಲಿ ನಡೆಯುತ್ತಿರುವ ಗೊಂದಲಗಳಿಗೆ ತೆರೆ ಎಳೆಯುವ ಕೆಲಸ ಆಗಬೇಕಿದೆ ಎಂದು ಹೇಳಿದರು.

<><><><>

ಗಣೇಶೋತ್ಸವ ಮತ್ತು ಈದ್ ಮಿಲಾದ್ ವೇಳೆ ಯಾವುದೇ ಬಂಟಿಗ್ಸ್, ಬ್ಯಾನರ್‌ಗಳನ್ನು ಮಹಾನಗರ ಪಾಲಿಕೆಯ ಅನುಮತಿ ಇಲ್ಲದೇ ಸಾರ್ವಜನಿಕ ಸ್ಥಳದಲ್ಲಿ ಕಟ್ಟುವಂತಿಲ್ಲ ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಸೂಚಿಸಿದ್ದಾರೆ. ದಾವಣಗೆರೆ ಜಿಲ್ಲಾಡಳಿತ ಭವನದಲ್ಲಿ ನಡೆದ ನಾಗರಿಕ ಸೌಹಾರ್ದ ಸಭೆಯಲ್ಲಿ

ಮಾತನಾಡಿದ ಅವರು, ಮನೆಯ ಬಳಿ ಬ್ಯಾನರ್‌ಗಳನ್ನು ಕಟ್ಟಿಕೊಳ್ಳಲು ಯಾವುದೇ ಅಭ್ಯಂತರ ಇಲ್ಲ. ಆದರೆ ಸಾರ್ವಜನಿಕ ಸ್ಥಳಗಳಲ್ಲಿ ಕಟ್ಟಲು ಕಡ್ಡಾಯವಾಗಿ ಪಾಲಿಕೆಯ ಅನುಮತಿ ಪಡಯಬೇಕು. ಇಲ್ಲವಾದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**ಧ್ವನಿ: ದಾವಣಗೆರೆ ಜಿಲ್ಲಾಧಿಕಾರಿ ಡಾ. ಗಂಗಾಧರ ಸ್ವಾಮಿ (೨೦ ಸೆಕೆಂಡ್‌ಗಳು)**

ಯಾದಗಿರಿ ಜಿಲ್ಲೆ ಭಾವೈಕ್ಯತೆಗೆ ಹೆಸರುವಾಸಿಯಾಗಿದೆ. ಗಣೇಶ ಚತುರ್ಥಿ ವೇಳೆ ಕಳೆದ ೧೦ ವರ್ಷಗಳಲ್ಲಿ ಒಂದೂ ಪ್ರಕರಣ ದಾಖಲಾಗಿಲ್ಲ. ಇದನ್ನು ಹೀಗೆಯೇ ಮುಂದುವರಿಸಿಕೊಂಡು ಹೋಗಬೇಕು. ಮುಂಬರುವ ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಹಬ್ಬವನ್ನು ಹಿಂದೂ, ಮುಸ್ಲಿಂ ಸಮುದಾಯದವರು ಶಾಂತಿ, ಸೌಹಾರ್ದದಿಂದ ಆಚರಿಸಬೇಕು ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಮನವಿ ಮಾಡಿದರು. ಯಾದಗಿರಿ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಪೊಲೀಸ್ ಇಲಾಖೆಯ ಯಾದಗಿರಿ ನಗರ ಪೊಲೀಸ್ ಠಾಣೆಯು ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬದ ಅಂಗವಾಗಿ ಆಯೋಜಿಸಿದ್ದ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು. ಗಣೇಶ ಮತ್ತು ಈದ್ ಹಬ್ಬಗಳು ಒಟ್ಟಿಗೆ ಬಂದಿದ್ದು, ಎರಡೂ ಹಬ್ಬಗಳು ಉಭಯ ಸಮುದಾಯಗಳಿಗೆ ಮಹತ್ವದಾಗಿದೆ. ಅಹಿತಕರ ಘಟನೆಗಳಿಗೆ ಅಸ್ಪದ ಕೊಡದಂತೆ ಹಬ್ಬವನ್ನು ಸಂಭ್ರಮಿಸಬೇಕು ಎಂದು ಹೇಳಿದರು. ಕೋಲಾರ ಜಿಲ್ಲೆಯಲ್ಲಿ ಹಿಂದೂ ಮತ್ತು ಮುಸ್ಲಿಂ ಸಮುದಾಯದವರು ಶಾಂತಿಯಿಂದ ಹಬ್ಬ ಆಚರಿಸಬೇಕು. ಸಮಾಜದ ಸ್ವಾಸ್ಥ್ಯ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕೈಗೊಳ್ಳುವ ಕ್ರಮಗಳಿಗೆ ಎಲ್ಲರೂ ಸಹಕಾರ ನೀಡಬೇಕು ಎಂದು ಕೆಜಿಎಫ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಮನವಿ ಮಾಡಿದರು. ಕೆಜಿಎಫ್ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಗಣೇಶ ಹಬ್ಬ ಮತ್ತು ಈದ್ ಮಿಲಾದ್ ಪ್ರಯುಕ್ತ ಶಾಂತಿ ಮತ್ತು ಸೌಹಾರ್ದತೆ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸಾರ್ವಜನಿಕರಿಗೆ ತೊಂದರೆಯಾಗದಂತೆ ಧ್ವನಿವರ್ಧಕಗಳನ್ನು ಬಳಸಬೇಕು. ಗಣೇಶೋತ್ಸವ ಸಂಘಟನೆಗಳು ಆಚರಣೆಗೆ ಪೊಲೀಸರಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಸಂಬಂಧಿಸಿದ ಇತರೆ ಕಚೇರಿಗಳಿಂದಲೂ ಅನುಮತಿ ಹೊಂದಿರಬೇಕು. ಶಾಂತಿ ಕದಡುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

<><><><>

ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಅಮಿತ್ ಶಾ, ಕಿರಣ್ ರಿಜಿಜು ಸೇರಿದಂತೆ ಮತ್ತಿತತರ ಗಣ್ಯರು ದೇಶದ ಜನತೆಗೆ ರಾಷ್ಟ್ರೀಯ ಬಾಹ್ಯಾಕಾಶ ದಿನದ ಶುಭಾಶಯ ಕೋರಿದ್ದಾರೆ. ಈ ದಿನದ ಅಂಗವಾಗಿ ಬೆಂಗಳೂರಿನ ಜವಾಹರ್‌ಲಾಲ್ ನೆಹರೂ ತಾರಾಲಯದ ವತಿಯಿಂದ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶಾಲಾ ಮಕ್ಕಳಿಗಾಗಿ, ಚಿತ್ರಸ್ಪರ್ಧೆ, ಆಶುಭಾಷಣ, ಆರ್ಯಭಟ ಮಾದರಿ ತಯಾರಿಕೆ, ರಸಪ್ರಶ್ನೆ ಮತ್ತು ಜಿಗ್ಸಾ ಪಜಲ್ ಚಟುವಟಿಕೆ ಆಯೋಜಿಸಲಾಗಿದೆ. ಚಂದ್ರನ ಕುರಿತ ಪ್ರದರ್ಶನ ಮತ್ತು ಸಾಕ್ಷ್ಯಚಿತ್ರ ಪ್ರದರ್ಶನ ಕೂಡ ಏರ್ಪಡಿಸಲಾಗಿದೆ.

<><><><>

ಮಹಾರಾಷ್ಟ್ರದ ಪಶ್ಚಿಮಘಟ್ಟ ಪ್ರದೇಶ ಹಾಗೂ ಕೃಷ್ಣಾ ನದಿ ಪಾತ್ರದಲ್ಲಿ ಧಾರಾಕಾರ ಮಳೆಯಾಗಿದ್ದು, ನದಿಯು ಅಪಾಯದ ಮಟ್ಟ ಮೀರಿ ಹರಿಯುತ್ತಿದೆ. ನದಿ ಪಾತ್ರದ ಜನರು ಮುಂಜಾಗ್ರತೆ ವಹಿಸುವಂತೆ ಜಿಲ್ಲಾಡಳಿತ ಎಚ್ಚರಿಸಿದೆ. ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯದ

ಮಟ್ಟ ಕಾಯ್ದುಕೊಂಡು ೨ ಲಕ್ಷದ ೬೧ ಸಾವಿರದ ೫೦೦ ಕ್ಯೂಸೆಕ್ ಪ್ರಮಾಣದ ನೀರನ್ನು ಕೃಷ್ಣಾ ನದಿಗೆ ಹರಿಸಲಾಗುತ್ತಿದೆ. ಪ್ರವಾಹದಿಂದಾಗಿ ಐದು ದಿನಗಳಿಂದ ಛಾಯಾ ದೇವಿ ಉತ್ಸವ ಮೂರ್ತಿಯನ್ನು ಮೇಲ್ಭಾಗದಲ್ಲಿಟ್ಟು ಪೂಜೆ ಸಲ್ಲಿಸಲಾಗುತ್ತಿದೆ ಎಂದು ಪುರೋಹಿತ ಚಿದಂಬರಭಟ್ಟ ಜೋಶಿ ಹೇಳಿದರು. ಇನ್ನೊಂದೆಡೆ, ಬಸವಸಾಗರ ಜಲಾಶಯಕ್ಕೆ ೨ ಲಕ್ಷದ ೫೫ ಸಾವಿರ ಕ್ಯೂಸೆಕ್ ನೀರು ಹರಿದು ಬಂದಿದ್ದು, ೨ ಲಕ್ಷದ ೬೧ ಸಾವಿರದ ೫೦೦ ಕ್ಯೂಸೆಕ್ ನೀರನ್ನು ೩೦ ಕ್ರಸ್ಟ್ ಗೇಟ್‌ಗಳ ಮುಖಾಂತರ ಕೃಷ್ಣಾ ನದಿಗೆ ಹಾಗೂ ೩ ಸಾವಿರ ಕ್ಯೂಸೆಕ್ ಎಡದಂಡೆ ಕಾಲುವೆಗೆ ಹಾಗೂ ೧ ಸಾವಿರ ಕ್ಯೂಸೆಕ್ ಬಲದಂಡೆ ಕಾಲುವೆಗೆ ಹರಿಸಲಾಗುತ್ತಿದೆ ಎಂದು ಜಲಾಶಯ ವಿಭಾಗೀಯ ಸಹಾಯಕ ಎಂಜಿನಿಯರ್ ವಿಜಯಕುಮಾರ ಅರಳಿ ಮಾಹಿತಿ ನೀಡಿದರು.

<><><><>

ಮಳೆಗಾಲ ಆಗಿರುವುದರಿಂದ ಪಂಚಾಯಿತಿಯಿಂದ ಕಡ್ಡಾಯವಾಗಿ ಗ್ರಾಮಸ್ಥರಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ಕ್ರಮಕೈಗೊಳ್ಳಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಹೇಳಿದ್ದಾರೆ. ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ನಾಯ್ಕಲ್, ಕಂದಳ್ಳಿ ಹಾಗೂ ಹೈಯ್ಯಾಳ ಗ್ರಾಮಗಳಿಗೆ ಭೇಟಿ ನೀಡಿ ಶುದ್ಧ ಕುಡಿಯುವ ನೀರು ಸರಬರಾಜು ಮಾಡುವ ಘಟಕ ಹಾಗೂ ಕಂದಳ್ಳಿ ಬ್ಯಾರೇಜ್ ಹತ್ತಿರವಿರುವ ನೀರು ಶುದ್ಧೀಕರಿಸುವ ಘಟಕ ಪರಿಶೀಲಿಸಿ ಅವರು ಮಾತನಾಡಿದರು. ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ೧೬ ಪಂಚಾಯಿತಿಗಳು ಕಡ್ಡಾಯವಾಗಿ ಪ್ರತಿಯೊಂದು ಗ್ರಾಮಕ್ಕೂ ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡಬೇಕು. ಅಶುದ್ಧ ನೀರು ಸರಬರಾಜು ಮಾಡಿದರೆ ಅಥವಾ ದೂರು ಬಂದರೆ, ಅಂತಹ ಪಂಚಾಯಿತಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

<><><><>

ಗ್ರಾಮ ಪಂಚಾಯತ್ ಮಟ್ಟದ ಆರ್ಥಿಕ ಸೇರ್ಪಡೆ ಯೋಜನೆಗಳ ಅಭಿಯಾನವು ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಇಡಗುಂಜಿ ಗ್ರಾಮ ಪಂಚಾಯಿತಿಯಲ್ಲಿ ನಡೆಯಿತು. ಕಾರ್ಯಕ್ರಮವನ್ನು ಭಾರತೀಯ ರಿಸರ್ವ್ ಬ್ಯಾಂಕ್‌ನ ವ್ಯವಸ್ಥಾಪಕ ಮೊನಿರಾಜು ಬ್ರಹ್ಮ ಉದ್ಘಾಟಿಸಿ, ಬ್ಯಾಂಕಿನ ಎಲ್ಲಾ ಅರ್ಹ ಗ್ರಾಹಕರು ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ ಮತ್ತು ಅಟಲ್ ಪಿಂಚಣಿ ಯೋಜನೆಯನ್ನು ಮಾಡಿಸಿಕೊಳ್ಳುವಂತೆ ಮನವಿ ಮಾಡಿದರು. ಕರ್ನಾಟಕ ಗ್ರಾಮೀಣ ಬ್ಯಾಂಕಿನ ಸಹಾಯಕ ಪ್ರಧಾನ ವ್ಯವಸ್ಥಾಪಕ ನವೀನ್, ಬ್ಯಾಂಕಿನಲ್ಲಿ ಸಿಗುವ ವಿವಿಧ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು.

<><><><>

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಮುತ್ತತ್ತಿ ಅರಣ್ಯ ವ್ಯಾಪ್ತಿಯ ಕಾವೇರಿ ವನ್ಯಜೀವಿ ಪ್ರದೇಶದ ಹುಣಸೆಮರ ಹಳ್ಳದ ಬಳಿ ಸುಮಾರು ಒಂದೂವರೆ ವರ್ಷದ ಹೆಣ್ಣು ಚಿರತೆ ಮೃತ ಸ್ಥಿತಿಯಲ್ಲಿ ಪತ್ತೆಯಾಗಿದೆ. ಹಿರಿಯ ಅರಣ್ಯಾಧಿಕಾರಿಗಳ ಪರಿಶೀಲನೆ ಬಳಿಕ ಇದು ಚಿರತೆಗಳ ಕಾದಾಟದಿಂದ ಸಾವಿಗೀಡಾಗಿದೆ ಎಂಬುದು ದೃಢಪಟ್ಟಿದೆ ಎಂದು ಹಲಗೂರು ಅರಣ್ಯಾಧಿಕಾರಿ ಪ್ರಮೋದ್ ಕುಮಾರ್ ದೇವ್ ಮಾಹಿತಿ ನೀಡಿದ್ದಾರೆ. ಅರಣ್ಯ ವೈದ್ಯಾಧಿಕಾರಿಗಳಾದ ಪ್ರವೀಣ್ ಮತ್ತು ಡೇವಿಡ್ ಕುಮಾರ್ ಮರಣೋತ್ತರ ಪರೀಕ್ಷೆ ನಡೆಸಿ, ಬಳಿಕ ಶವಸಂಸ್ಕಾರ ನೆರವೇರಿಸಿದರು.

<><><><>

ಕಾನೂನಿನ ಅರಿವು ಎಲ್ಲರಿಗೂ ಅಗತ್ಯವಾಗಿದ್ದು, ವಿವಿಧ ಪ್ರಕರಣಗಳಲ್ಲಿ ಅತ್ಯಂತ ಸುಲಲಿತ ಮತ್ತು ಸರಳವಾಗಿ ವ್ಯಾಜ್ಯಗಳ ಇತ್ಯರ್ಥಕ್ಕೆ ಕಾಯಂ ಜನತಾ ನ್ಯಾಯಾಲಯ ಪೂರಕವಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸವಿತಾ ಪಿ.ಆರ್. ಮನವಿ ಮಾಡಿದ್ದಾರೆ. ರಾಮನಗರ ತಾಲೂಕಿನ ಬನ್ನಿಕುಪ್ಪೆ ಗ್ರಾಮ ಪಂಚಾಯಿತಿಯಲ್ಲಿ ಖಾಯಂ ಲೋಕ ಅದಾಲತ್‌ನ ಮಹತ್ವ ಮತ್ತು ಅದರ ಕಾರ್ಯವೈಖರಿ ಕುರಿತು ಕಾನೂನು ಅರಿವು-ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಅಂಚೆ, ದೂರವಾಣಿ ಸೇವೆ, ವಿದ್ಯುತ್ ಪೂರೈಕೆ, ನೀರಿನ ಸರಬರಾಜು ಮಾಡುವ ಯಾವುದೇ ಸಂಸ್ಥೆ, ಸಾರ್ವಜನಿಕ ಸಂರಕ್ಷಣೆ, ನೈರ್ಮಲ್ಯ ವ್ಯವಸ್ಥೆ, ಆಸ್ಪತ್ರೆ, ವಿತರಣೆ ಸೇವೆ, ವಿಮೆ ಸೇವೆ, ಬ್ಯಾಂಕಿಂಗ್ ಹಾಗೂ ಹಣಕಾಸು ಸಂಸ್ಥೆಗಳ, ವಸತಿ ಮತ್ತು ರಿಯಲ್ ಎಸ್ಟೇಟ್, ಶಿಕ್ಷಣ ಸೇರಿದಂತೆ ವಿವಿಧ ರೀತಿಯ ಸೇವೆಗಳಲ್ಲಿ ನೂನ್ಯತೆ ಉಂಟಾದಾಗ ಪ್ರಕರಣ ದಾಖಲಿಸಿ, ಜನತಾ ನ್ಯಾಯಾಲಯದಿಂದ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ಅವರು ಮಾಹಿತಿ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>